# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 222 | Pages. 2 | Date: 14-08-2026, FRIDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 222 - ಪುಟಗಳು : 2 | 14-08-2026 ಶುಕ್ರವಾರ | Ph: 8762954248 | ದರ : ₹1


# ಅಂತು ಇಂತು ಕೆಪಿ 2 ಕಾಲರ್ ಆನೆ ಸೆರೆ

## ನಿರಂತರ ಓಡಾಟ, ಹೈರಾಣಾಗಿಸಿದ ಸಲಗ | ಜಿಲ್ಲಾಧಿಕಾರಿ ಸ್ಥಳದಲ್ಲೇ ಮೊಕ್ಕಾಂ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬೇಲೂರು ಭಾಗದಲ್ಲಿ ಸಾರ್ವಜನಿಕರಿಗೆ ತೀವ್ರ ತೊಂದರೆ ನೀಡುತ್ತಾ ಕಾಫಿ ತೋಟಗಳಲ್ಲಿ ದಾಂಧಲೆ ನಡೆಸುತ್ತಿದ್ದ ಕೆಪಿ 2 ಹೆಸರಿನ ಕಾಡಾನೆ ಸೆರೆ ಕಾರ್ಯಾಚರಣೆ ಗುರುವಾರ ಯಶಸ್ವಿಯಾಗಿದೆ.



ಸತತ ಏಳು ಗಂಟೆಗಳ ಕಾರ್ಯಾಚರಣೆ ಬಳಿಕ ಆನೆಯನ್ನು ಸೆರೆ ಹಿಡಿಯಲಾಯಿತು. ತಾಲ್ಲೂಕಿನ ಶಿರಗೂರು ಕಾಫಿ ತೋಟದಲ್ಲಿ ಆನೆ ಸೆರೆಯಾಗಿದೆ. ಅಂದಾಜು 15 ಕಿ.ಮೀ. ಓಡಾಡಿ ಸಂಜೆ 5ರ ವೇಳೆಗೆ ಅರವಳಿಕೆ ಚುಚ್ಚುಮದ್ದಿಗೆ ನಿತ್ರಾಣಗೊಂಡ ಆನೆಯನ್ನು ಕುಮ್ಕಿ ಆನೆಗಳ ಸಹಾಯದಿಂದ ಲಾರಿ ಹತ್ತಿಸಲಾಯಿತು. ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಮಧ್ಯಾಹ್ನದಿಂದ ಕೊನೆಯವರೆಗೂ ಸ್ಥಳದಲ್ಲಿದ್ದು ಪರಿಶೀಲಿಸಿದರು.



ಪೂರ್ವ ನಿರ್ಧಾರದಂತೆ ಬೆಳಿಗ್ಗೆ 10 ಗಂಟೆಗೆ ಚಿಲ್ಕೂರಿನಲ್ಲಿ ನಿರ್ಮಿಸಿರುವ ತಾತ್ಕಾಲಿಕ ಶಿಬಿರದಿಂದ ಕುಮ್ಕಿ ಆನೆಗಳು ಲಾರಿ ಏರಿ ಪ್ರಯಾಣ ಬೆಳೆಸಿದವು. ಹೆಂಜಿಹಳ್ಳಿಯ ಕಾಫಿ ತೋಟದಲ್ಲಿ ಕಾಡಾನೆ ಬೀಡು ಬಿಟ್ಟಿರುವ ಮಾಹಿತಿಯನ್ನು ಡ್ರೋನ್ ಕ್ಯಾಮರಾ ಮೂಲಕ ತಿಳಿದ ಅಧಿಕಾರಿಗಳು ಅಲ್ಲಿಗೆ ತೆರಳಿದರು. ಆನೆಯ ಸ್ಥಳ ಪತ್ತೆ ಹಚ್ಚಿ ಕುಮ್ಕಿ ಆನೆ ಏರಿದ ಪಶುವೈದ್ಯಾಧಿಕಾರಿಗಳು ದೂರದಿಂದ ಡಾಟ್ ಮಾಡಿದರಾದರೂ ಗುರಿ ತಪ್ಪಿತು. ಅದೇ ತಕ್ಷಣ ಮತ್ತೊಂದು ಡಾಟ್ ಮಾಡಿದರೂ ತಪ್ಪಿಸಿಕೊಂಡ ಕಾಡಾನೆ ಅಲ್ಲಿಂದ ಪಲಾಯನ ಮಾಡಿತು. ಹೆಂಜ್ಜಿಹಳ್ಳಿಯಿಂದ ಅರಮನೆ ಗುಡ್ಡ, ಕ್ಯಾನಹಳ್ಳಿ ತೋಟಗಳಲ್ಲಿ ಓಡಾಡಿತು. ಸಂಜೆ 5ರ ವೇಳೆಗೆ ಶಿರಗೂರು ಎಸ್ಟೇಟ್‌ನಲ್ಲಿ ಬೀಡುಬಿಟ್ಟಿರುವ ಖಚಿತ ಮಾಹಿತಿ ಮೇರೆಗೆ ಕುಮ್ಕಿ ಆನೆಗಳನ್ನು ಲಾರಿ ಮೂಲಕ ಅಲ್ಲಿಗೆ ಸ್ಥಳಾಂತರಿಸಲಾಯಿತು. ಈ ವೇಳೆ ಗುರಿ ತಪ್ಪದ ಹಾಗೆ ಅರವಳಿಕೆ ಚುಚ್ಚುಮದ್ದು ನೀಡಿದ್ದರಿಂದ ಸುಮಾರು 1.5 ಕಿ.ಮೀ. ದೂರ ಓಡಿದ ಆನೆ ನಿತ್ರಾಣಗೊಂಡು ಮಲಗಿತು. ಬಳಿಕ ಸ್ಥಳಕ್ಕೆ ದೌಡಾಯಿಸಿದ ಕುಮ್ಕಿ ಆನೆಗಳ ನೆರವಿನಿಂದ ಹಗ್ಗಕಟ್ಟಿ ಸ್ವಲ್ಪ ದೂರ ಎಳೆದು ಲಾರಿ ಹತ್ತಿಸಲಾಯಿತು.

### ಪಿಎಸ್ಐ ಜೀಪ್ ಬೆನ್ನಟ್ಟಿದ ಆನೆ

ತನ್ನ ಸೆರೆಗೆ ನೂರಾರು ಸಿಬ್ಬಂದಿ, ಏಳು ಕುಮ್ಕಿ ಆನೆಗಳು ಬೆನ್ನಟ್ಟಿದ್ದರೂ ಎಲ್ಲರನ್ನೂ ಹಿಮ್ಮೆಟ್ಟಿಸಬಲ್ಲೇ ಎಂಬ ಆತ್ಮಸ್ಥೈರ್ಯದಲ್ಲಿ ಕೆಪಿ 2 ಕಾಲರ್ ಆನೆ ಇಡೀ ದಿನ ಸಂಚರಿಸಿತು. ಸಾರ್ವಜನಿಕರ ಹಿತದೃಷ್ಟಿ ಹಾಗೂ ಭದ್ರತೆ ಕಾರಣದಿಂದ ಅರೇಹಳ್ಳಿ ಪಿಎಸ್ಐ ಶೋಭಾ ಭರಮ್ಮಣ್ಣನವರ್ ಸ್ಥಳದಲ್ಲೇ ಇದ್ದರು. ತಾಲ್ಲೂಕಿನ ಕೋಗೋಡು ಬೇಡಿ ಎಸ್ಟೇಟ್ ಬಳಿ ಹತ್ತಾರು ಲಾರಿ, ಸ್ಥಳೀಯರು ಇದ್ದಾಗಲೇ ಕಾಫಿ ಎಸ್ಟೇಟ್‌ನಿಂದ ಹೊರ ಬಂದ ಕಾಡಾನೆ ಪಿಎಸ್ಐ ಇದ್ದ ಜೀಪ್ ಬೆನ್ನಟ್ಟಿತು. ಚಾಲಕ ಸಮಯ ಪ್ರಜ್ಞೆ ಮೆರೆದು ಜೀಪ್ ಓಡಿಸಿದ್ದರಿಂದ ಆನೆ ರಸ್ತೆ ದಾಟಿ ಕಾಫಿ ತೋಟಕ್ಕೆ ನುಗ್ಗಿತು.

ಕಾರ್ಯಾಚರಣೆಯಲ್ಲಿ ಸಿಸಿಎಫ್ ಏಡುಕುಂಡಲು, ಡಿಸಿಎಫ್ ಸೌರಭ್‌ಕುಮಾರ್, ಪಶುವೈದ್ಯಾಧಿಕಾರಿಗಳಾದ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಡಾ. ವಸೀಮ್, ಮೈಸೂರು ವೃತ್ತದ ಡಾ. ಆದರ್ಶ ಹಾಗೂ ಭದ್ರಾ ಹುಲಿ ಸಂರಕ್ಷಿತ ಪ್ರದೇಶದ ಡಾ. ವಿನಾಯಕ ಸೇರಿ 300ಕ್ಕೂ ಅಧಿಕ ಸಿಬ್ಬಂದಿ ಪಾಲ್ಗೊಂಡಿದ್ದರು.

### ನೆಮ್ಮದಿಯ ನಿಟ್ಟುಸಿರು ಬಿಟ್ಟ ಅಧಿಕಾರಿಗಳು

ಎರಡು ಹೆಣ್ಣಾನೆಗಳಿಗೆ ರೇಡಿಯೋ ಕಾಲರ್ ಅಳವಡಿಕೆ ಹಾಗೂ ಕೆಪಿ 2 ಕಾಲರ್ ಹೆಸರಿನ ಆನೆ ಸೆರೆಗೆ ನಾಗರಹೊಳೆ ಆನೆ ಶಿಬಿರದಿಂದ ಮಹೇಂದ್ರ, ಏಕಲವ್ಯ ಹಾಗೂ ದುಬಾರೆ ಶಿಬಿರದಿಂದ ಪ್ರಶಾಂತ, ಧನಂಜಯ, ಈಶ್ವರ, ಲಕ್ಷ್ಮಣ ಮತ್ತು ಅಜ್ಜಯ್ಯ ಎಂಬ ಕುಮ್ಕಿ ಆನೆಗಳು ಬಂದಿವೆ.

ಆ. 10 ಹಾಗು 11ರಂದು ಹೆಣ್ಣಾನೆಗೆ ರೇಡಿಯೋ ಕಾಲರ್ ಅಳವಡಿಸಲಾಗಿದೆ. ಆ. 12ರಂದು ವಿಶ್ವ ಆನೆಗಳ ದಿನವಾದ್ದರಿಂದ ಕಾರ್ಯಾಚರಣೆ ಸ್ಥಗಿತಗೊಳಿಸಿ ಗುರುವಾರಕ್ಕೆ ಮುಂದೂಡಲಾಗಿತ್ತು. ಅರಣ್ಯ ಇಲಾಖೆ ಅಧಿಕಾರಿಗಳ ನಿಗದಿಯಂತೆ ಎಲ್ಲಾ ಕೆಲಸ ಸುಸೂತ್ರವಾಗಿ ನೆರವೇರಿದ್ದು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ.

# ಮಾನವ-ಆನೆ ಸಂಘರ್ಷ ವಿಶೇಷ ತಂಡ ಕಳುಹಿಸಿಕೊಡಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ನವದೆಹಲಿ: ಹಾಸನ ಜಿಲ್ಲೆಯ ಮಲೆನಾಡು ಭಾಗದಲ್ಲಿ ಹೆಚ್ಚಿರುವ ಕಾಡಾನೆ-ಮಾನವ ಸಂಘರ್ಷದ ವಸ್ತುಸ್ಥಿತಿ ಅರಿಯಲು ಕೇಂದ್ರ ಸರ್ಕಾರ ವಿಶೇಷ ತಂಡ ಕಳುಹಿಸಿಕೊಡಬೇಕು ಎಂದು ಸಂಸದ ಶ್ರೇಯಸ್ ಪಟೇಲ್ ಅವರು ಅರಣ್ಯ ಸಚಿವ ಭೂಪೇಂದ್ರ ಯಾದವ್ ಅವರಿಗೆ ಕೋರಿದರು.

ಜಿಲ್ಲೆಯಲ್ಲಿ 90ಕ್ಕೂ ಹೆಚ್ಚು ಆನೆಗಳು ಸಂಚರಿಸುತ್ತಿದ್ದು, ಇದುವರೆಗೆ ಆನೆ ದಾಳಿಯಿಂದ 80ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದಾರೆ. ಮಾನವ ಜೀವಗಳಿಗೆ ಮುಂದುವರಿದಿರುವ ಅಪಾಯವನ್ನು ಗಮನದಲ್ಲಿಟ್ಟುಕೊಂಡು ಈ ಹಿಂದೆ ಭರವಸೆ ನೀಡಿರುವ ತಜ್ಞರ ತಂಡದ ಭೇಟಿಯನ್ನು ಯಾವುದೇ ವಿಳಂಬವಿಲ್ಲದೆ ತಕ್ಷಣ ಆಯೋಜಿಸಬೇಕು ಎಂದರು.

ಭೇಟಿ ನೀಡುವ ತಂಡದಲ್ಲಿ ಹಿರಿಯ ಅರಣ್ಯ ಇಲಾಖೆ ಅಧಿಕಾರಿಗಳ ಜೊತೆಗೆ ಅನುಭವಿ ಆನೆ ತಜ್ಞರು, ವನ್ಯಜೀವಿ ತಜ್ಞರು ಹಾಗೂ ವಿಜ್ಞಾನಿಗಳಿರಬೇಕು. ಹಾಸನದ ಬಾಧಿತ ಪ್ರದೇಶಗಳಿಗೆ ಭೇಟಿ ನೀಡಿ ರೈತರು ಹಾಗೂ ಸ್ಥಳೀಯ ಜನರೊಂದಿಗೆ ನೇರವಾಗಿ ಚರ್ಚಿಸಿ ಮಾನವ-ಆನೆ ಸಂಘರ್ಷಕ್ಕೆ ಶಾಶ್ವತ ಮತ್ತು ವೈಜ್ಞಾನಿಕ ಪರಿಹಾರ ರೂಪಿಸುವಂತೆ ಸಂಸದರು ಮನವಿ ಮಾಡಿದರು.

# ಸಮಯ ವ್ಯರ್ಥ ಮಾಡಬೇಡಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ವಿದ್ಯಾರ್ಥಿ ಸಮಯ ಅಮೂಲ್ಯವಾಗಿದ್ದು ಅದನ್ನು ವ್ಯರ್ಥ ಮಾಡದೆ ಉನ್ನತ ಗುರಿ ಸಾಧನೆಗೆ ವಿನಿಯೋಗ ಮಾಡಿಕೊಳ್ಳಬೇಕು ಎಂದು ಹಾಸನಾಂಬ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಡಾ.ಬಸವರಾಜು ಸಲಹೆ ನೀಡಿದರು.

ನಗರದ ಗುಡ್ ಸಿಟಿಜನ್ ಕಾಲೇಜಿನಲ್ಲಿ 2026-27ನೇ ಸಾಲಿನ ನೂತನ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಸ್ವಾಗತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕಳೆದು ಹೋದ ಸಮಯ ವಾಪಾಸ್ ಬರುವುದಿಲ್ಲ. ವ್ಯಾಸಂಗವೊಂದೇ ವಿದ್ಯಾರ್ಥಿಗಳ ಪರಮ ಧ್ಯೇಯ ಆಗಿರಬೇಕು. ಇಲ್ಲವಾದರೆ ಭವಿಷ್ಯದ ದಿನಗಳು ಕಷ್ಟವಾಗುತ್ತವೆ ಎಂದರು.

ರೂರಲ್ ಎಜುಕೇಶನ್ ಟ್ರಸ್ಟ್ ಆಡಳಿತ ಅಧಿಕಾರಿ ಚಿಕ್ಕಯ್ಯ ಮಾತನಾಡಿದರು.

ಗುಡ್ ಸಿಟಿಜನ್ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಡಾ. ಹೇಮಂತ್ ಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಪದವಿ ಕಾಲೇಜಿನ ಪ್ರಾಂಶುಪಾಲ ಕಾಂತರಾಜು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಜರಿದ್ದರು.

# ಒತ್ತುವರಿ ತೆರವಿಗೆ ಸಹಕರಿಸಿದ ಬೀದಿ ಬದಿ ವ್ಯಾಪಾರಿಗಳು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಗರೆ: ಬೇಲೂರು ತಾಲ್ಲೂಕಿನ ಹಗರೆ ಗ್ರಾಮದಲ್ಲಿ ವ್ಯಾಪಾರಿಗಳೇ ಸ್ವಯಂ ಪ್ರೇರಿತವಾಗಿ ರಸ್ತೆ ಬದಿಯ ಅಂಗಡಿಗಳ ತೆರವು ಮಾಡುವ ಮೂಲಕ ಮಾದರಿಯಾಗಿದ್ದಾರೆ.

ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಎಲ್ಲಾ ಕಡೆ ಫುಟ್‌ಪಾತ್ ತೆರವು ಕಾರ್ಯಾಚರಣೆ ನಡೆಸಲಾಗುತ್ತಿದೆ.

ರಾಷ್ಟ್ರೀಯ ಹೆದ್ದಾರಿ 373ರ ಹಾಸನ-ಬೇಲೂರು ಮಧ್ಯದ ಹಗರೆ ಗ್ರಾಮದಲ್ಲಿ ರಸ್ತೆಯ ಎರಡೂ ಬದಿಯ ಪಾದಚಾರಿ ಮಾರ್ಗಗಳ ಮೇಲೆ ಅತಿಕ್ರಮಣವಾಗಿ ಪೆಟ್ಟಿಗೆ ಅಂಗಡಿ ಇಟ್ಟುಕೊಳ್ಳಲಾಗಿತ್ತು. ತಾತ್ಕಾಲಿಕ ಶೆಡ್ ನಿರ್ಮಿಸಿಕೊಂಡು ವ್ಯಾಪಾರ ಮಾಡುತ್ತಿದ್ದ ವ್ಯಾಪಾರಿಗಳಿಗೆ ತೆರವು ಮಾಡಬೇಕೆಂಬ ಸೂಚನೆಯನ್ನು ಬುಧವಾರ ಅಧಿಕಾರಿಗಳು ನೀಡಿದ್ದರು. ಆ ಹಿನ್ನೆಲೆಯಲ್ಲಿ 32 ಗೂಡಂಗಡಿಗಳ ಮಾಲೀಕರು ಸ್ವಯಂ ಪ್ರೇರಿತವಾಗಿ ರಸ್ತೆ ಬಿಟ್ಟುಕೊಟ್ಟಿದ್ದಾರೆ.

ತೆರವು ಮಾಡದಿದ್ದರೆ ಗುರುವಾರ ಸಂಪೂರ್ಣ ತೆರವು ಮಾಡಿ ಸಾಮಗ್ರಿ ತೆಗೆದುಕೊಂಡು ಹೋಗುವುದಾಗಿ ಅಧಿಕಾರಿಗಳು ಎಚ್ಚರಿಸಿದ್ದರು. ಅವರ ಸೂಚನೆ ಮೇರೆಗೆ ಕೆಲವು ಹೂ-ಹಣ್ಣು ಕಾಯಿ ಅಂಗಡಿಯವರು ಬುಧವಾರವೇ ರಸ್ತೆಯಿಂದ ಹಿಂದೆ ಸರಿದಿದ್ದರು. ಜೊತೆಗೆ ಇನ್ನೊಂದು ಬದಿಯಲ್ಲಿ ಕಟ್ಟಡ ಕಟ್ಟಿಕೊಂಡು ಮುಂದೆ ಫುಟ್ ಪಾತ್‌ಗೆ ಶೀಟ್‌ನಿಂದ ಛಾವಣಿ ಮಾಡಿಕೊಂಡಿದ್ದವರೂ ಸಹ ಛಾವಣಿ ತೆಗೆದು ಹಾಕಿದರು.

ಕಾರ್ಯಾಚರಣೆಯಲ್ಲಿ ರಾಷ್ಟ್ರೀಯ ಹೆದ್ದಾರಿ ಸಹಾಯಕ ಇಂಜಿನಿಯರ್ ವಿಘ್ನೇಶ್ವರ್, ಹಳೇಬೀಡು ಪೊಲೀಸ್ ಉಪನಿರೀಕ್ಷಕ ಮಂಜುನಾಥ್, ಹಗರೆ ಪೊಲೀಸ್ ಎಎಸ್ಐ ತೀರ್ಥಕುಮಾರ್ ಮತ್ತಿತರರಿದ್ದರು.

# ಸಮಸ್ಯೆಗಳ ಆಗರ ಚಿಟ್ಟನಹಳ್ಳಿ ಬಡಾವಣೆ

## ಸ್ವಚ್ಛತೆ ಮರೀಚಿಕೆ | ಸಾಂಕ್ರಾಮಿಕ ರೋಗ ಭೀತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಪುರಸಭೆ ವ್ಯಾಪ್ತಿಯ 13ನೇ ವಾರ್ಡ್‌ನ ಚಿಟ್ಟನಹಳ್ಳಿ ಬಡಾವಣೆಯಲ್ಲಿ ಶುಚಿತ್ವವಿಲ್ಲದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ.

ಸರ್ಕಾರಿ ನರ್ಸಿಂಗ್ ಕಾಲೇಜು, ನ್ಯಾಯಾಧೀಶರ ವಸತಿ ಗೃಹ, ಶ್ರೀ ವೆಂಕಟೇಶ್ವರ ವಿದ್ಯಾ ಸಂಸ್ಥೆ ಜೊತೆಗೆ ಸರ್ಕಾರಿ ಶಿಕ್ಷಕರು, ನೌಕರರು ಮತ್ತು ವಕೀಲರ ನಿವಾಸಗಳಿಂದ ಕೂಡಿದ ಪ್ರತಿಷ್ಠಿತ ಬಡಾವಣೆ ಎಂಬ ಹೆಗ್ಗಳಿಕೆ ಇದ್ದರೂ ಕಸದ ಸಮರ್ಪಕ ವಿಲೇವಾರಿ ಇಲ್ಲದೆ ಮತ್ತು ಚರಂಡಿಗಳ ಸರಿಯಾದ ನಿರ್ವಹಣೆ ಇಲ್ಲದಿರುವುದು ಸಾರ್ವಜನಿಕರ ಆರೋಗ್ಯಕ್ಕೂ ಕಂಟಕವಾಗಿದೆ.

ಪೌರ ಕಾರ್ಮಿಕರು ದಿನನಿತ್ಯ ಮನೆ ಮನೆಯಿಂದ ಕಸ ಸಂಗ್ರಹಿಸಲು ಬಾರದಿರುವುದರಿಂದ ಮುಖ್ಯ ರಸ್ತೆ ಹಾಗು ಖಾಲಿ ನಿವೇಶನಗಳಲ್ಲಿ ಕಸದ ರಾಶಿ ಗೋಚರಿಸುತ್ತಿದೆ. ಚರಂಡಿಗಳಲ್ಲಿ ಗಿಡಗಂಟಿಗಳು ಬೆಳೆದಿರುವ ಜೊತೆಗೆ ಪ್ಲಾಸ್ಟಿಕ್ ಹಾಗೂ ಹೂಳು ತುಂಬಿದ್ದು, ಕೊಳಚೆ ನೀರು ಸರಾಗವಾಗಿ ಹರಿಯಲು ಸಾಧ್ಯವಾಗದೆ ನಿಂತ ನೀರಿನಿಂದಾಗಿ ಸೊಳ್ಳೆಗಳ ಹಾವಳಿ ಮಿತಿಮೀರಿದೆ. ಹೀಗಾಗಿ ಡೆಂಘೆ, ಮಲೇರಿಯಾದಂತಹ ಸಾಂಕ್ರಾಮಿಕ ರೋಗಗಳ ಭೀತಿ ಆವರಿಸಿದೆ.



ಪ್ರತಿದಿನ ಬೆಳಿಗ್ಗೆ ತಪ್ಪದೇ ಮನೆ ಮನೆಗೆ ಬಂದು ಕಸ ಸಂಗ್ರಹಿಸುವ ವಾಹನದ ವ್ಯವಸ್ಥೆಯಾಗಬೇಕು. ತಕ್ಷಣವೇ ಚರಂಡಿಯಲ್ಲಿರುವ ಹೂಳು ಮತ್ತು ಪ್ಲಾಸ್ಟಿಕ್ ತ್ಯಾಜ್ಯವನ್ನು ತೆಗೆದು ಕಲುಷಿತ ನೀರು ಹರಿಯಲು ದಾರಿ ಮಾಡಿಕೊಡಬೇಕು. ಬಡಾವಣೆಯಾದ್ಯಂತ ನಿಯಮಿತವಾಗಿ ಕ್ರಿಮಿನಾಶಕ ಸಿಂಪಡಣೆ ಮಾಡಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಅಥವಾ ಖಾಲಿ ಜಾಗಗಳಲ್ಲಿ ಕಸ ಎಸೆಯುವವರಿಗೆ ಸೂಕ್ತ ದಂಡ ವಿಧಿಸಬೇಕು.

ತಾಲ್ಲೂಕು ಆಡಳಿತದ ನೇತೃತ್ವದಲ್ಲಿ ಆರೋಗ್ಯ ಮತ್ತು ಪುರಸಭೆ ಅಧಿಕಾರಿಗಳು ಬಡಾವಣೆಯ ನಿವಾಸಿಗಳ ಆರೋಗ್ಯ ಮತ್ತು ನೈರ್ಮಲ್ಯದ ಹಿತದೃಷ್ಟಿಯಿಂದ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಮೂಲಕ ಸಮಸ್ಯೆ ನಿವಾರಿಸಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# ಕ್ರಾಫರ್ಡ್ ಆಸ್ಪತ್ರೆಗೆ ಮೂಲ ಸೌಕರ್ಯ ಕಲ್ಪಿಸಲು ಕ್ರಮ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ಉದ್ದೇಶದಿಂದ ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಗೆ ಹಂತ ಹಂತವಾಗಿ ಅಗತ್ಯ ಮೂಲಸೌಕರ್ಯ ಕಲ್ಪಿಸಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದರು.

ಪಟ್ಟಣದ ಕ್ರಾಫರ್ಡ್ ಆಸ್ಪತ್ರೆಯಲ್ಲಿ 32 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ 12 ಹಾಸಿಗೆಗಳ ನೂತನ ಐಸೊಲೇಷನ್ ವಾರ್ಡ್ ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮೀಣ ಪ್ರದೇಶದ ಜನರು ಸರ್ಕಾರಿ ಆಸ್ಪತ್ರೆಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಅವಲಂಬಿಸಿದ್ದಾರೆ. ಬಡ ಹಾಗೂ ಮಧ್ಯಮ ವರ್ಗದ ಜನರಿಗೆ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಚಿಕಿತ್ಸೆ ದೊರೆಯುವಂತಾಗಬೇಕು. ಈ ನಿಟ್ಟಿನಲ್ಲಿ ಸರ್ಕಾರಿ ಆಸ್ಪತ್ರೆಗಳ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಅಗತ್ಯ ವೈದ್ಯಕೀಯ ಸೌಲಭ್ಯಗಳ ಹೆಚ್ಚಳಕ್ಕೆ ಆದ್ಯತೆ ನೀಡಲಾಗುವುದು ಎಂದರು.

ನೂತನ ಐಸೊಲೇಷನ್ ವಾರ್ಡ್‌ನಿಂದ ಸಾಂಕ್ರಾಮಿಕ ರೋಗಗಳು ಸೇರಿ ಪ್ರತ್ಯೇಕ ಆರೈಕೆಯ ಅಗತ್ಯವಿರುವ ರೋಗಿಗಳಿಗೆ ಪ್ರತ್ಯೇಕವಾಗಿ ಚಿಕಿತ್ಸೆ ನೀಡಲು ಅನುಕೂಲವಾಗಲಿದೆ. ಅದರಿಂದ ಇತರ ರೋಗಿಗಳಿಗೆ ಸೋಂಕು ಹರಡುವುದನ್ನು ನಿಯಂತ್ರಿಸುವುದರ ಜೊತೆಗೆ ಅಗತ್ಯವಿರುವ ರೋಗಿಗಳಿಗೆ ಉತ್ತಮ ಆರೈಕೆ ಒದಗಿಸಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಯುವರಾಜ್ ಮಾತನಾಡಿ, ಆಸ್ಪತ್ರೆಯ ಮೂಲಸೌಕರ್ಯ ಅಭಿವೃದ್ಧಿಯಿಂದ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ. ನೂತನ ಐಸೊಲೇಷನ್ ವಾರ್ಡ್ ಮೂಲಕ ಅಗತ್ಯವಿರುವ ರೋಗಿಗಳಿಗೆ ಪ್ರತ್ಯೇಕ ಚಿಕಿತ್ಸಾ ವ್ಯವಸ್ಥೆ ದೊರೆಯಲಿದ್ದು, ಆರೋಗ್ಯ ಸೇವೆಯ ಗುಣಮಟ್ಟ ಹೆಚ್ಚಲಿದೆ ಎಂದರು.

# ಹಾಸನದಲ್ಲಿ ಬಿಜೆಪಿಯಿಂದ ತಿರಂಗಾ ಯಾತ್ರೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಗುರುವಾರ ಬಿಜೆಪಿಯಿಂದ ಹಮ್ಮಿಕೊಂಡಿದ್ದ ತಿರಂಗಾ ಯಾತ್ರೆಗೆ ಬಿಜೆಪಿ ಉಸ್ತುವಾರಿ ದತ್ತಾತ್ರೇಯ ಚಾಲನೆ ನೀಡಿದರು.

ನಗರದ ಬಾಲಕಿಯರ ಪದವಿ ಪೂರ್ವ ಕಾಲೇಜು ಮುಂಭಾಗದಿಂದ ಆರಂಭಗೊಂಡ ಜಾಥಾ ಎಂ.ಜಿ. ರಸ್ತೆ, ಫುಡ್ ಕೋರ್ಟ್ ರಸ್ತೆ, ಎಂ.ಸಿ.ಇ. ಕಾಲೇಜು ಗಣಪತಿ ದೇವಸ್ಥಾನದ ಪಕ್ಕದ ರಸ್ತೆ, ಆಕಾಶವಾಣಿ, ಜಿಲ್ಲಾ



ಕ್ರೀಡಾಂಗಣ ಮುಂಭಾಗ, ಸಹ್ಯಾದ್ರಿ ವೃತ್ತ, ಮಹಾವೀರ ವೃತ್ತ, ದೇವಿಗೆರೆ ರಸ್ತೆ, ಸುಭಾಷ್ ವೃತ್ತ, ಬಿ.ಎಂ. ರಸ್ತೆ, ಸುವರ್ಣ ಹೋಟೆಲ್ ರಸ್ತೆ ಮೂಲಕ ಸಂತೆಪೇಟೆ ವೃತ್ತ ತಲುಪಿತು. ನಂತರ ಎನ್.ಆರ್. ವೃತ್ತ, ಹಳೆ ಬಸ್ ನಿಲ್ದಾಣ ರಸ್ತೆ ಮಾರ್ಗವಾಗಿ ಬಂದು ಆರಂಭ ಸ್ಥಳದಲ್ಲೇ ಅಂತ್ಯಗೊಂಡಿತು.ರಾಷ್ಟ್ರಧ್ವಜ ಹಿಡಿದು ಬೈಕ್‌ಗಳಲ್ಲಿ ಸಾಗಿದ ಬಿಜೆಪಿ ಮುಖಂಡರು, ಪದಾಧಿಕಾರಿಗಳು ಹಾಗು ಕಾರ್ಯಕರ್ತರು ದೇಶಭಕ್ತಿ ಮತ್ತು ರಾಷ್ಟ್ರಾಭಿಮಾನದ ಸಂದೇಶ ಸಾರಿದರು.

ದತ್ತಾತ್ರೇಯ ಮಾತನಾಡಿ, ಸಹಸ್ರಾರು ಜನರ ಬಲಿದಾನ, ತ್ಯಾಗದಿಂದ ದೊರೆತಿರುವ ಸ್ವಾತಂತ್ರ್ಯವನ್ನು ರಕ್ಷಿಸಿ ಭವಿಷ್ಯದ ಪೀಳಿಗೆಗೆ ಸ್ವಾತಂತ್ರ್ಯ ಹೋರಾಟವನ್ನು ಹೇಳಿಕೊಡುವ ಕೆಲಸ ನಮ್ಮಿಂದ ಆಗಬೇಕಿದೆ.

ಸಾವಿರಾರು ದೇಶಪ್ರೇಮಿಗಳು ಯಾವ ಸ್ವಾರ್ಥವಿಲ್ಲದೆ ಬ್ರಿಟಿಷರ ವಿರುದ್ಧ ಹೋರಾಡಿ ದೇಶವನ್ನು ದಾಸ್ಯದಿಂದ ಬಿಡುಗಡೆ ಮಾಡಿದರು. ಆದರೆ ಇಂದಿರಾ ಗಾಂಧಿ ಆಡಳಿತಾವಧಿಯಲ್ಲಿ ತುರ್ತು ಪರಿಸ್ಥಿತಿ ಘೋಷಣೆ ಮೂಲಕ ಸ್ವಾತಂತ್ರ್ಯವನ್ನು ಕಸಿದುಕೊಳ್ಳಲಾಯಿತು. ದೇಶದ ಜನರು, ಪ್ರಜೆಗಳು ಯಾವುದೇ ರಾಜಕೀಯ ಪಕ್ಷಗಳು ದೇಶಕ್ಕೆ ಕುತ್ತು ಬಂದಾಗ ದೇಶ ಮೊದಲು ಎಂಬ ಭಾವನೆ ಹೊಂದಿರಬೇಕು ಎಂದರು.

# ಮಾಜಿ ಶಾಸಕ ದಿ. ರುದ್ರೇಶ್‌ಗೌಡ ವಿರುದ್ಧ ಆರೋಪ ಸರಿಯಲ್ಲ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಬೇಲೂರು: ಮಾಜಿ ಶಾಸಕ ದಿ. ವೈ. ಎನ್. ರುದ್ರೇಶ್‌ಗೌಡ ಅವರು ಶಾಸಕರಾಗಿದ್ದ ಅವಧಿಯಲ್ಲಿ ಬಗರ್ ಹುಕುಂ ಸಮಿತಿ ಮೂಲಕ ಬಡವರು ಹಾಗೂ ರೈತರಿಗೆ ಜಮೀನು ಮಂಜೂರು ಮಾಡುವ ಪ್ರಕ್ರಿಯೆಯಲ್ಲಿ ಯಾವುದೇ ಅಕ್ರಮ ನಡೆದಿಲ್ಲ ಎಂದು ಕಾಂಗ್ರೆಸ್ ಮುಖಂಡ ಕೃಷ್ಣೇಗೌಡ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬರ ಪರಿಸ್ಥಿತಿ ಕುರಿತು ತಾಲೂಕಿಗೆ ಭೇಟಿ ನೀಡಿದ್ದ ಜಿಲ್ಲಾ ಉಸ್ತುವಾರಿ ಸಚಿವ ಶಿವಲಿಂಗೇಗೌಡ ಅವರೊಂದಿಗೆ ಮಾಜಿ ಸಚಿವ ಬಿ. ಶಿವರಾಂ ಮಾತನಾಡುವ ವೇಳೆ, ರುದ್ರೇಶ್‌ಗೌಡ ಅವರು ಬಗರ್ ಹುಕುಂ ಸಮಿತಿ ಅಧ್ಯಕ್ಷರಾಗಿದ್ದ ಅವಧಿಯಲ್ಲಿ ಅತಿ ಹೆಚ್ಚು ಅಕ್ರಮ ಅವರ ಅವಧಿಯಲ್ಲಿ ನಡೆದಿದೆ ಎಂದು ಆರೋಪಿಸಿರುವುದು ಕುಟುಂಬಕ್ಕೆ ನೋವುಂಟು ಮಾಡಿದೆ.

ಬಗರ್ ಹುಕುಂ ಜಮೀನು ಕೋರಿ ಸಲ್ಲಿಕೆಯಾಗುವ ಅರ್ಜಿಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸುತ್ತಿದ್ದರು. ಅರ್ಜಿದಾರರ ಅರ್ಹತೆ, ದಾಖಲೆಗಳು ಹಾಗೂ ಜಮೀನಿನ ವಿವರಗಳನ್ನು ಪರಿಶೀಲಿಸಿದ ಬಳಿಕ ಅಧಿಕಾರಿಗಳು ವರದಿ ನೀಡುತ್ತಿದ್ದರು. ಆ ವರದಿ ಆಧರಿಸಿಯೇ ಸರ್ಕಾರದ ನಿಯಮಾನುಸಾರ ಮುಂದಿನ ಪ್ರಕ್ರಿಯೆ ನಡೆಯುತ್ತಿತ್ತು. ಸಮಿತಿಯಲ್ಲಿಯೂ ಅಧಿಕಾರಿಗಳ ಪರಿಶೀಲನೆ ಮತ್ತು ವರದಿ ಆಧರಿಸಿಯೇ ತೀರ್ಮಾನ ಕೈಗೊಳ್ಳಲಾಗುತ್ತಿತ್ತು ಎಂದು ಸ್ಪಷ್ಟಪಡಿಸಿದರು.

ಅಧ್ಯಕ್ಷರು ಯಾರೇ ಆಗಿರಲಿ ತಮಗೆ ಬೇಕಾದವರಿಗೆ ನೇರವಾಗಿ ಜಮೀನು ಮಂಜೂರು ಮಾಡಲು ಸಾಧ್ಯವಿಲ್ಲ. ಅಧಿಕಾರಿಗಳ ಪರಿಶೀಲನೆ ಹಾಗೂ ವರದಿ ಬಳಿಕವೇ ಸಂಬಂಧಪಟ್ಟ ದಾಖಲೆಗಳಿಗೆ ಸಹಿ ಮಾಡಲಾಗುತ್ತಿತ್ತು. ಹೀಗಿರುವಾಗ ದಿವಂಗತ ರುದ್ರೇಶ್‌ಗೌಡ ಅವರ ವಿರುದ್ಧ ಏಕಾಏಕಿ ಆರೋಪ ಮಾಡುವುದು ಸರಿಯಲ್ಲ ಎಂದರು.

ರೈತರಿಗೆ ಯಾವುದೇ ಕಾರಣಕ್ಕೂ ಅನ್ಯಾಯವಾಗಬಾರದು. ಬಗರ್ ಹುಕುಂ ಜಮೀನು ಮಂಜೂರಾತಿಗೆ ಸಂಬಂಧಿಸಿದಂತೆ ಯಾವುದೇ ಆರೋಪಗಳಿದ್ದರೆ ರಾಜಕೀಯ ಆರೋಪ-ಪ್ರತ್ಯಾರೋಪಗಳಿಗೆ ಅವಕಾಶ ನೀಡದೆ ಅಧಿಕಾರಿಗಳು ಸಲ್ಲಿಸಿರುವ ಕಡತಗಳು, ದಾಖಲೆಗಳು ಮತ್ತು ವರದಿಗಳನ್ನು ಪರಿಶೀಲಿಸಿ ನಿಜಾಂಶವನ್ನು ಹೊರತರಬೇಕು. ಅರ್ಹ ರೈತರಿಗೆ ನ್ಯಾಯ ದೊರೆಯಬೇಕು ಎಂದು ಒತ್ತಾಯಿಸಿದರು.

ಮಾಜಿ ಸಚಿವ ಬಿ. ಶಿವರಾಂ ಅವರು ಕಾಂಗ್ರೆಸ್‌ನ ಹಿರಿಯ ನಾಯಕರಾಗಿದ್ದು, ಸ್ವಪಕ್ಷದ ನಾಯಕರ ವಿರುದ್ಧವೇ ಆರೋಪ ಮಾಡುತ್ತಿರುವುದು ವಿಪರ್ಯಾಸ. ರಾಜಕೀಯ ಭಿನ್ನಾಭಿಪ್ರಾಯಗಳಿಗಾಗಿ ದಿ. ರುದ್ರೇಶ್‌ಗೌಡ ಅವರ ಹೆಸರನ್ನು ಎಳೆದು ತಂದು ಕುಟುಂಬಕ್ಕೆ ನೋವುಂಟು ಮಾಡಬಾರದು ಎಂದು ಹೇಳಿದರು.

ಪುರಸಭೆ ಮಾಜಿ ಅಧ್ಯಕ್ಷ ಎ.ಆರ್. ಅಶೋಕ್ ಮಾತನಾಡಿ, ಕಾಂಗ್ರೆಸ್ ಪಕ್ಷವನ್ನು ಒಗ್ಗಟ್ಟಿನಿಂದ ಮುನ್ನಡೆಸುವ ಬದಲು ಕಳೆದ ಎಂಟು ವರ್ಷಗಳಿಂದ ಬೇಲೂರಿನಲ್ಲಿ ವಿಭಜನೆಯ ರಾಜಕಾರಣ ನಡೆಯುತ್ತಿದೆ ಎಂದು ಆರೋಪಿಸಿದರು.

ಕ್ಷೇತ್ರದಲ್ಲಿ ವಿವಿಧ ಅವಧಿಯಲ್ಲಿ ಶಾಸಕರಾಗಿ ಸೇವೆ ಸಲ್ಲಿಸಿದ ರುದ್ರೇಶ್‌ಗೌಡ, ಲಿಂಗೇಶ್ ಹಾಗೂ ಹಾಲಿ ಶಾಸಕ ಹೆಚ್.ಕೆ. ಸುರೇಶ್ ಅವರು ತಮ್ಮ ತಮ್ಮ ಅವಧಿಯಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಕೊಡುಗೆ ನೀಡಿದ್ದಾರೆ. ರಸ್ತೆ, ಶಿಕ್ಷಣ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಹಲವು ಅಭಿವೃದ್ಧಿ ಕಾಮಗಾರಿಗಳು ನಡೆದಿವೆ. ಎಲ್ಲ ಕಾಮಗಾರಿಗಳ ಶ್ರೇಯಸ್ಸನ್ನೂ ಒಬ್ಬರೇ ಪಡೆದುಕೊಳ್ಳುವುದು ಸರಿಯಲ್ಲ. ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ ಎಲ್ಲ ಜನಪ್ರತಿನಿಧಿಗಳ ಕೊಡುಗೆಯನ್ನು ಗೌರವಿಸಬೇಕು ಎಂದರು.

ರುದ್ರೇಶ್‌ಗೌಡ ಅವರ ಹೆಸರಿಗೆ ಧಕ್ಕೆ ತರುವಂತಹ ಹೇಳಿಕೆಗಳನ್ನು ನೀಡುವುದನ್ನು ನಿಲ್ಲಿಸಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ತಾಲೂಕು ಜನರೊಂದಿಗೆ ಸೇರಿ ಹೋರಾಟ ನಡೆಸಲಾಗುವುದು. ಆರೋಪಗಳಿದ್ದರೆ ಸಂಬಂಧಪಟ್ಟ ದಾಖಲೆಗಳು ಹಾಗೂ ಅಧಿಕಾರಿಗಳ ವರದಿಗಳನ್ನು ಪರಿಶೀಲಿಸಿ ನಿಜಾಂಶವನ್ನು ಬಹಿರಂಗಪಡಿಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಅಲ್ಪಸಂಖ್ಯಾತರ ರಾಜ್ಯ ಕಾರ್ಯದರ್ಶಿ ಅಬ್ದುಲ್ ಸಮ್ಮದ್, ಮುಖಂಡರಾದ ಹಳೇಬೀಡು ಗಂಗಾಧರ್, ಒಬಿಸಿ ಮಾಜಿ ಅಧ್ಯಕ್ಷ ಸತ್ಯನಾರಾಯಣ, ಕೆಪಿಸಿಸಿ ಸದಸ್ಯ ರಮೇಶ್ ಇತರರಿದ್ದರು.

# ಧಾರ್ಮಿಕ ಕೇಂದ್ರಗಳು ಜ್ಞಾನ ಪಸರಿಸುವ ಕೇಂದ್ರಗಳಾಗಲಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಗ್ರಾಮೀಣ ಪ್ರದೇಶದ ದೇವಾಲಯಗಳು ಕೇವಲ ಧಾರ್ಮಿಕ ಆಚರಣೆಗೆ ಸೀಮಿತವಾಗದೆ ಶ್ರದ್ಧೆ-ಭಕ್ತಿಯ ಜೊತೆಗೆ ಜ್ಞಾನ, ಸಂಸ್ಕೃತಿ ಹಾಗೂ ಸಾಮಾಜಿಕ ಸಾಮರಸ್ಯ ಬೆಳೆಸುವ ಕೇಂದ್ರಗಳಾಗಬೇಕು ಎಂದು ಕರ್ನಾಟಕ ಜಾನಪದ ಪರಿಷತ್ ತಾಲ್ಲೂಕು ಅಧ್ಯಕ್ಷ ಬಿ.ಪರಮೇಶ್ ಹೇಳಿದರು.

ತಾಲ್ಲೂಕಿನ ಬಾಳೇನಹಳ್ಳಿಯ ಬಯಲು ಬಸವೇಶ್ವರ ದೇವಾಲಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಹಲವು ದೇವಾಲಯಗಳಲ್ಲಿ ಪ್ರತಿ ಅಮಾವಾಸ್ಯೆ ಹಾಗೂ ಹುಣ್ಣಿಮೆ ದಿನ ನೂರಾರು ಭಕ್ತರು ಶ್ರದ್ಧಾಭಕ್ತಿಯಿಂದಪೂಜೆ ಸಲ್ಲಿಸುತ್ತಾರೆ. ಪ್ರತಿ ತಿಂಗಳು ವಿಭಿನ್ನ ಕಾರ್ಯಕ್ರಮ ಆಯೋಜಿಸಿ ಜ್ಞಾನ ದಾಸೋಹ ನಡೆಸುವ ಪರಂಪರೆ ಆರಂಭವಾಗಬೇಕು ಎಂದರು.

ವಿವಿಧ ಕ್ಷೇತ್ರಗಳ ಪರಿಣಿತರನ್ನು ಆಹ್ವಾನಿಸಿ ವಿಚಾರ ವಿನಿಮಯ, ಉಪನ್ಯಾಸ, ಜಾನಪದ ಗೀತೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಬಹುದು.

ಅದರಿಂದ ಭಕ್ತರು ಕೆಲಕಾಲ ಒಟ್ಟಿಗೆ ಕುಳಿತು ವಿಚಾರಗಳನ್ನು ಆಲಿಸುವ ಅವಕಾಶ ದೊರೆಯುತ್ತದೆ. ಬಳಿಕ ಸಹಪಂಕ್ತಿ ಭೋಜನದಲ್ಲಿ ಎಲ್ಲರೂ ಒಂದಾಗಿ ಕುಳಿತು ಊಟ ಮಾಡುವುದರಿಂದ ಪರಸ್ಪರ ಪರಿಚಯ, ಆತ್ಮೀಯತೆ ಮತ್ತು ಸಾಮಾಜಿಕ ಸಾಮರಸ್ಯ ಮತ್ತಷ್ಟು ಬಲಗೊಳ್ಳುತ್ತದೆಂದು ಹೇಳಿದರು.

ಬಾಳೇನಹಳ್ಳಿಯ ಬಯಲು ಬಸವೇಶ್ವರ ದೇವಾಲಯದ ವಿಶೇಷತೆಯನ್ನು ಉಲ್ಲೇಖಿಸಿದ ಪರಮೇಶ್, ದೇವಾಲಯದ ವಿಹಂಗಮ ನೋಟ ಹಾಗೂ ಗ್ರಾಮಸ್ಥರು ಒಟ್ಟಾಗಿ ಸೇರಿ ನೆಲದ ಮೇಲೆ ಕುಳಿತು ಸಹಪಂಕ್ತಿ ಭೋಜನ ಮಾಡುವ ಸಾಂಪ್ರದಾಯಿಕ ವ್ಯವಸ್ಥೆ ಗಮನ ಸೆಳೆಯುತ್ತದೆ. ದೇವಾಲಯದ ಆವರಣದಲ್ಲಿರುವ ಹಳೆಯ ಬೇವಿನ ಮರದ ಎಲೆಗಳನ್ನು ಬಳಸಿಕೊಂಡು ಒಗ್ಗರಣೆ ಹಾಕಿ ಸಾಂಬಾರು ತಯಾರಿಸುವ ಗ್ರಾಮೀಣ ಪರಂಪರೆಯೂ ವಿಶೇಷವಾಗಿದ್ದು, ಇಂತಹ ಆಚರಣೆಗಳು ನಮ್ಮ ಸಂಸ್ಕೃತಿ ಮತ್ತು ಸಾಮೂಹಿಕ ಜೀವನದ ಪ್ರತೀಕವಾಗಿವೆ ಎಂದರು. ಬಾಳೇನಹಳ್ಳಿ ತಾಲ್ಲೂಕಿನ ವಿದ್ಯಾವಂತ ಹಾಗೂ ಸಾಂಸ್ಕೃತಿಕವಾಗಿ ಶ್ರೀಮಂತ ಗ್ರಾಮವಾಗಿದ್ದು, ಪ್ರತಿ ಅಮಾವಾಸ್ಯೆಯಂದು ಗ್ರಾಮಸ್ಥರು, ನೌಕರವರ್ಗ ಹಾಗೂ ನಂದಿ ಗೆಳೆಯರ ಬಳಗದ ವತಿಯಿಂದ ನಡೆಯುತ್ತಿರುವ ಜನಮುಖಿ ಮತ್ತು ಸಮಾಜಮುಖಿ ಕಾರ್ಯಗಳು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



ಕರ್ನಾಟಕ ಜಾನಪದ ಪರಿಷತ್ ಕಾರ್ಯದರ್ಶಿ ದಿಬ್ಬೂರು ಯೋಗೀಶ್, ಖಜಾಂಚಿ ಕಾತ್ಯಾಯಿನಿ ತೇವರಿಮಠ, ಶ್ರೀಧರ್ ಕಣಕಟ್ಟೆ ಮತ್ತಿತರರಿದ್ದರು.

# ಸರ್ಕಾರಿ ಆಸ್ಪತ್ರೆಗೆ ಸೌಲಭ್ಯ ಕಲ್ಪಿಸಲು ಸಚಿವರಿಗೆ ಆಗ್ರಹ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಸಚಿವರಾಗಿ ಅಧಿಕಾರ ವಹಿಸಿಕೊಂಡಿರುವ ಕೆ.ಎಂ. ಶಿವಲಿಂಗೇಗೌಡ ಅವರು ಕ್ಷೇತ್ರದ ಜನರ ನಿರೀಕ್ಷೆ ಹಾಗು ಆಶಯಗಳಿಗೆ ಸ್ಪಂದಿಸಿ ಜಲ್ವಂತ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಬೇಕು. ಮುಖ್ಯವಾಗಿ ಸರ್ಕಾರಿ ಆಸ್ಪತ್ರೆಗೆ ಅಗತ್ಯ ಸೌಲಭ್ಯ ಕಲ್ಪಿಸಬೇಕೆಂದು ಬಿಜೆಪಿ ಗ್ರಾಮಾಂತರ ಘಟಕದ ಮಾಜಿ ಪ್ರಧಾನ ಕಾರ್ಯದರ್ಶಿ ಶಿವರಾಜ್ ಕೆಂಪುಸಾಗರ ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಾರ್ವಜನಿಕ ಆಸ್ಪತ್ರೆಯಲ್ಲಿ ಹಲವು ತಿಂಗಳಿಂದ ಔಷಧಿ, ಚುಚ್ಚುಮದ್ದು ಸೇರಿ ಅಗತ್ಯ ವೈದ್ಯಕೀಯ ಸಾಮಾಗ್ರಿಗಳ ಕೊರತೆ ಎದುರಾಗಿದೆ. ಮಕ್ಕಳಿಗೆ ನೀಡಲಾಗುವ ವಿಟಮಿನ್-ಎ ಕ್ಯಾಪ್ಸುಲ್ ಹಾಗೂ ಡ್ರಾಪ್ಸ್‌ಗಳ ಸಮರ್ಪಕ ಸರಬರಾಜು ಇಲ್ಲದಿರುವುದರಿಂದ ಪೊಷಕರು ಆತಂಕಕ್ಕೊಳಗಾಗಿದ್ದಾರೆ. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ಬರುವ ರೋಗಿಗಳು ಮೂಲಸೌಲಭ್ಯಗಳ ಕೊರತೆಯಿಂದ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಆರೋಪಿಸಿದರು.

ಬಾಣಾವರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯೂ ಅಗತ್ಯ ಔಷಧಿಗಳು ಲಭ್ಯವಾಗದೆ ಸಣ್ಣಪುಟ್ಟ ಖಾಯಿಲೆಗೆ ಖಾಸಗಿ ಆಸ್ಪತ್ರೆ ಹಾಗು ಔಷಧಂಗಿಡಗಳ ಮೊರೆ ಹೋಗುವಂತಾಗಿದೆ. ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಔಷಧಿ ಮತ್ತು ವೈದ್ಯಕೀಯ ಪರಿಕರಗಳ ಲಭ್ಯತೆ ಖಚಿತಪಡಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಹಾಗೂ ಸ್ಥಳೀಯ ಆಡಳಿತ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ನಗರದ ಸರ್ಕಾರಿ ಆಸ್ಪತ್ರೆಯ ಆರೋಗ್ಯ ರಕ್ಷಾ ಸಮಿತಿ ನಿಯಮಿತವಾಗಿ ಸಭೆ ನಡೆಸಿ ಆಸ್ಪತ್ರೆಯ ಅಗತ್ಯತೆಗಳನ್ನು ಪರಿಶೀಲಿಸಿ ಪರಿಹರಿಸುವಲ್ಲಿ ವಿಫಲವಾಗಿದೆ. ಅದರಿಂದ ಆಸ್ಪತ್ರೆಯ ಆಡಳಿತ ವ್ಯವಸ್ಥೆಯ ಮೇಲೂ ಪ್ರಶ್ನೆಗಳು ಮೂಡಿವೆ. ಈ ಕುರಿತು ಸಚಿವರು ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕೆಂದರು.

ಸಾರ್ವಜನಿಕ ಆಸ್ಪತ್ರೆಯ ಅವ್ಯವಸ್ಥೆ ಹಾಗೂ ತಾಲ್ಲೂಕಿನಲ್ಲಿ ಕಾನೂನು ಸುವ್ಯವಸ್ಥೆ ಬಲಪಡಿಸಲು ಕ್ರಮ ಕೈಗೊಳ್ಳದಿದ್ದರೆ ಪ್ರತಿಭಟನೆ ನಡೆಸಲಾಗುವುದು. ಜೊತೆಗೆ ಕಾನೂನು ಹೋರಾಟ ಕೈಗೆತ್ತಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

# ಹಾಸನದ ಖಾಲಿ ನಿವೇಶನಗಳೆಲ್ಲ ದುರ್ವಾಸನೆ ತಾಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಬಡಾವಣೆಗಳಲ್ಲಿ ಸ್ವಚ್ಛತೆ ಎಂಬುದು ಮರೀಚಿಕೆಯಾಗಿದ್ದು ಖಾಲಿ ನಿವೇಶನಗಳು ಹಾವು, ಹೆಗ್ಗಣಗಳ ಆವಾಸ ತಾಣವಾಗಿ ಮಾರ್ಪಟ್ಟಿರುವುದು ಮಾತ್ರವಲ್ಲದೆ ದುರ್ವಾಸನೆ ಹರಡುತ್ತಿವೆ.

ಶಾಂತಿನಗರ, ವಿಶ್ವೇಶ್ವರಯ್ಯ ಬಡಾವಣೆ, ತಮ್ಲಾಪುರ, ಹೇಮಾವತಿ ನಗರ, ಉತ್ತರ ಬಡಾವಣೆಯಲ್ಲಿ ಅವ್ಯವಸ್ಥೆ ಹೇಳತೀರದಾಗಿದೆ. ಅವೈಜ್ಞಾನಿಕ ರಸ್ತೆ, ಚರಂಡಿ ನಿರ್ಮಾಣದಿಂದಾಗಿ ಕೊಳಚೆ ನೀರು ರಸ್ತೆಯ ಮೇಲೆ ಹರಿಯುತ್ತಿರುವ ಪರಿಣಾಮ ಜನರು ಪರದಾಡುತ್ತಿದ್ದಾರೆ. ಸ್ವಚ್ಛತಾ ಕೆಲಸ ಕೈಗೊಳ್ಳುವಂತೆ ಮಹಾನಗರ ಪಾಲಿಕೆಗೆ ಮನವಿ ಸಲ್ಲಿಸಿ ಸುಸ್ತಾಗಿರುವ ನಿವಾಸಿಗಳು ಮೌನಕ್ಕೆ ಶರಣಾಗಿದ್ದಾರೆ. ಅನೈರ್ಮಲ್ಯದಿಂದ ಸಾಂಕ್ರಾಮಿಕ ರೋಗ ಹರಡುವ ಭೀತಿಯೂ ಕಾಡುತ್ತಿದೆ.

ಖಾಲಿ ನಿವೇಶನಗಳಲ್ಲಿ ಹಲವು ವರ್ಷಗಳಿಂದ ಯಾವುದೇ ಕಟ್ಟಡ ಕಾಮಗಾರಿ ಪ್ರಾರಂಭವಾಗದ ಹಿನ್ನೆಲೆಯಲ್ಲಿ ಪಾರ್ಥೇನಿಯಂ ಸೇರಿ ಇತರ ಗಿಡಗಂಟಿಗಳು ಬೆಳೆದು ನಿಂತಿವೆ. ಅದೇ ಜಾಗದಲ್ಲಿ ಸಾರ್ವಜನಿಕರು ತ್ಯಾಜ್ಯ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಪ್ರದೇಶವು ದುರ್ನಾತ ಬೀರುತ್ತಿದೆ. ಈ ಪರಿಣಾಮ ಇಲಿ, ಹೆಗ್ಗಣ, ಹಾವು ಮತ್ತಿತರ ಕ್ರಿಮಿ ಕೀಟಗಳ ಸಂಖ್ಯೆ ಹೆಚ್ಚಾಗಿ ತೊಂದರೆಯಾಗುತ್ತಿದೆ. ಹಗಲು ಹೊತ್ತಿನಲ್ಲಿ ಕಾಣಿಸಿಕೊಳ್ಳದ ಹೆಗ್ಗಣಗಳು ರಾತ್ರಿಯಾದರೆ ಮನೆ ಬಾಗಿಲಿಗೆ ಬಂದು ದರ್ಶನ ನೀಡುತ್ತಿರುವುದು ಶಾಂತಿನಗರ, ಉತ್ತರ ಬಡಾವಣೆಯಲ್ಲಿ ಕಂಡುಬಂದಿದೆ. ಹೀಗಾಗಿ ಸಾರ್ವಜನಿಕರು ಯಾವಾಗಲೂ ಮನೆ ಬಾಗಿಲು ಹಾಕಿಕೊಂಡೇ ಇರಬೇಕಾದ ದುಸ್ಥಿತಿ ನಿರ್ಮಾಣವಾಗಿದೆ. ಖಾಲಿ ನಿವೇಶನಗಳಲ್ಲಿ ಮನೆ ನಿರ್ಮಿಸಿಕೊಳ್ಳದ ಮಾಲೀಕರಿಗೆ ದಂಡ ವಿಧಿಸುವ ಅಥವಾ ಸ್ವಚ್ಛತೆಯ ಹೊಣೆ ಹೊರೆಸಲಾಗಿದೆಯಾದರೂ ನಗರದಲ್ಲಿ ಕಾರ್ಯಗತಕ್ಕೆ ಬಂದಿಲ್ಲ. ಖಾಲಿ ನಿವೇಶನಗಳಲ್ಲಿ ಮನೆ ನಿರ್ಮಿಸಿಕೊಂಡಿರುವವರು ತಮ್ಮ ಸುತ್ತಲಿನ ಪರಿಸರ ಕಂಡು ಮರುಗುವಂತಾಗಿದೆ.



ಶಾಂತಿನಗರದ ಬಹುತೇಕ ಕಡೆ ಚರಂಡಿ ನೀರು ಸರಾಗವಾಗಿ ಹರಿದು ಹೋಗಲು ವ್ಯವಸ್ಥೆ ಇಲ್ಲವಾಗಿದೆ. ನಿರ್ಮಿಸಿರುವ ಚರಂಡಿ ಸಂಪೂರ್ಣ ಗಿಡಗಂಟಿಗಳಿಂದ ಮುಚ್ಚಿರುವುದರಿಂದ ಕೊಳಚೆ ನೀರು ಒಂದೆಡೆ ಸಂಗ್ರಹವಾಗಿ ದುರ್ವಾಸನೆ ಬೀರುತ್ತಿದೆ. ಅದರಿಂದ ಸೊಳ್ಳೆಗಳ ಕಾಟ ವಿಪರೀತವಾಗಿದೆ. ಕಡಿಮೆ ಖರ್ಚಿನಲ್ಲಿ ಸ್ವಚ್ಛತೆ ಕೆಲಸ ಮುಗಿಯುವ ಹಾಗಿದ್ದರೆ ನಾವೇ ಮಾಡಿಕೊಳ್ಳುತ್ತಿದ್ದೆವು. ಆದರೆ ಭಾರೀ ಹಣ ವ್ಯಯವಾಗುವುದರಿಂದ ಸುತ್ತಲಿನ ನಿವಾಸಿಗಳು ಮನಸ್ಸು ಮಾಡುತ್ತಿಲ್ಲವೆಂದು ಸ್ಥಳೀಯ ನಿವಾಸಿ ಹೇಳಿದರು.

ಬಡಾವಣೆ ಮುಖ್ಯ ರಸ್ತೆಗಳು ಸಂಪೂರ್ಣ ಹದಗೆಟ್ಟು ಸ್ವಲ್ಪ ಮಳೆಯಾದರೂ ಆಳೆತ್ತರ ಗುಂಡಿಯಲ್ಲಿ ನೀರು ನಿಲ್ಲುತ್ತದೆ. ಈ ರಸ್ತೆಗಳಲ್ಲಿ ಬೈಕ್ ಓಡಿಸುವುದು ಸಾಹಸದ ಕೆಲಸವಾಗಿದೆ. ಅಲ್ಪ ಎಚ್ಚರ ತಪ್ಪಿದರೂ ಗುಂಡಿಗೆ ಬಿದ್ದು ಗಾಯ ಮಾಡಿಕೊಳ್ಳುವಂತಾಗಿದೆ. ಇನ್ನು ಬೀದಿ ದೀಪಗಳಿಲ್ಲದೆ ಸಂಜೆ ಬಳಿಕ ಮನೆಯಿಂದ ಹೊರಬರಲು ಸಾಧ್ಯವಾಗುತ್ತಿಲ್ಲ ಎಂಬುದು ಅವರ ಆರೋಪವಾಗಿದೆ.

ನಿಗದಿತ ತೆರಿಗೆ ಪಾವತಿಸಿದರೂ ಮೂಲಸೌಕರ್ಯಗಳಿಲ್ಲ. ಮಹಾನಗರ ಪಾಲಿಕೆಗೆ ಚುನಾಯಿತ ಪ್ರತಿನಿಧಿಗಳಿಲ್ಲದೆ ಸಮಸ್ಯೆಯನ್ನು ಯಾರಿಗೆ ಹೇಳುವುದು ಎನ್ನುವಂತಾಗಿದೆ. ಅಧಿಕಾರಿಗಳಿಗೆ ಹೇಳಿದರೆ ಸ್ಪಂದನೆ ಸಿಗುವುದಿಲ್ಲ. ವಾರ್ಡ್ ಸದಸ್ಯರು ಇದ್ದಿದ್ದರೆ ಅವರಿಗೆ ದುಂಬಾಲು ಬಿದ್ದು ಕೆಲಸ ಮಾಡಿಸಿಕೊಳ್ಳಬಹುದಿತ್ತು. ಓಟಿನ ಆಸೆಗೆ ಅವರು ಮುತುವರ್ಜಿ ವಹಿಸುತ್ತಿದ್ದರು. ಆದರೆ ಚುನಾವಣೆ ನಡೆಯದೆ ಭಾರೀ ಸಮಸ್ಯೆಯಾಗಿದೆ ಎಂದರು.

ಬಡಾವಣೆ ಮಾತ್ರವಲ್ಲದೆ ಮುಖ್ಯ ರಸ್ತೆಗಳಲ್ಲೂ ಸ್ವಚ್ಛತೆ ಮರೀಚಿಕೆಯಾಗಿದೆ. ರಸ್ತೆಯ ಎಲ್ಲೆಂದರಲ್ಲಿ ಕಸದ ರಾಶಿಗಳು ಗೋಚರಿಸುತ್ತಿವೆ. ಮಹಾನಗರ ಪಾಲಿಕೆಯಲ್ಲಿ ಪೌರ ಕಾರ್ಮಿಕರ ಕೊರತೆಯಿಂದ ಸ್ವಚ್ಛತಾ ಕೆಲಸಗಳು ಸಮರ್ಪಕವಾಗಿ ಆಗುತ್ತಿಲ್ಲ. ಹಾಸನ ನಗರಸಭೆಯಿಂದ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದ ಬಳಿಕ ಸಮಸ್ಯೆಗಳು ಜಟಿಲವಾಗುತ್ತಲೇ ಇವೆ.

## ಇತಿಹಾಸದಲ್ಲಿ ಈ ದಿನ

### ಆಗಸ್ಟ್-14

1947: ಭಾರತ ಸ್ವಾತಂತ್ರ್ಯದ ಮುನ್ನಾದಿನ. ಭಾರತವು ಬ್ರಿಟಿಷರ ಆಳ್ವಿಕೆಯಿಂದ ಸ್ವಾತಂತ್ರ್ಯ ಪಡೆಯುವ ಮುನ್ನಾ ದಿನವಾದ ಆಗಸ್ಟ್ 14ರಂದು ದೇಶಾದ್ಯಂತ ಸ್ವಾತಂತ್ರ್ಯ ಸಂಭ್ರಮದ ಸಿದ್ಧತೆಗಳು ನಡೆದವು. ಆಗಸ್ಟ್ 15ರ ಮಧ್ಯರಾತ್ರಿ ಭಾರತ ಸ್ವತಂತ್ರ ರಾಷ್ಟ್ರವಾಗಿ ಹೊರಹೊಮ್ಮಿತು.

1947: ಬ್ರಿಟಿಷ್ ಭಾರತ ವಿಭಜನೆಯ ಹಿನ್ನೆಲೆಯಲ್ಲಿ ಪಾಕಿಸ್ತಾನ ಸ್ವತಂತ್ರ ರಾಷ್ಟ್ರವಾಗಿ ಅಸ್ತಿತ್ವಕ್ಕೆ ಬಂತು. ಮೊಹಮ್ಮದ್ ಅಲಿ ಜಿನ್ನಾ ಪಾಕಿಸ್ತಾನದ ಮೊದಲ ಗವರ್ನರ್ ಜನರಲ್ ಆದರು.

1958: ಭಾರತದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಭಾರತ್ ರತ್ನ ಪ್ರಶಸ್ತಿಯನ್ನು ಮೊದಲ ಬಾರಿಗೆ 1954ರಲ್ಲಿ ಸ್ಥಾಪಿಸಲಾಗಿತ್ತು.

**ಜನನ**

1777: ಹ್ಯಾನ್ಸ್ ಕ್ರಿಶ್ಚಿಯನ್ ಓರ್ಸ್ಟೆಡ್, ಡೆನ್ಮಾರ್ಕ್‌ನ ಪ್ರಸಿದ್ಧ ಭೌತಶಾಸ್ತ್ರಜ್ಞ ಹಾಗೂ ರಸಾಯನಶಾಸ್ತ್ರಜ್ಞ. ವಿದ್ಯುತ್ ಪ್ರವಾಹವು ಕಾಂತೀಯ ಪರಿಣಾಮ ಉಂಟುಮಾಡುತ್ತದೆ ಎಂಬುದನ್ನು ಕಂಡುಹಿಡಿದವರು.

1867: ಜಾನ್ ಗಾಲ್ಸ್‌ವರ್ತಿ, ಪ್ರಸಿದ್ಧ ಇಂಗ್ಲಿಷ್ ಕಾದಂಬರಿಕಾರ ಹಾಗೂ ನಾಟಕಕಾರ. 1932ರಲ್ಲಿ ಸಾಹಿತ್ಯದ ನೊಬೆಲ್ ಪ್ರಶಸ್ತಿ ಪಡೆದರು.

# ಅದೊಂದು ಬೇರೆಯದೇ ಅನುಭೂತಿ...4

**ಧನಂಜಯ ಜೀವಾಳ ಬಿ.ಕೆ.**

ಗ್ರಾಮಾಯಣ-46

ಚಾರಣವನ್ನು ಸಂಘಟಿಸುವ ಮೊದಲು ಅರಣ್ಯ ಇಲಾಖೆಯ ಅನುಮತಿ ಕಡ್ಡಾಯವಾಗಿದ್ದು, ಅದನ್ನು ಹಲವು ದಿನಗಳ ಮುಂಚೆಯೇ ಪಡೆದಿದ್ದೇವೆ. ನಿಂತಲ್ಲೆಲ್ಲಾ, ನೋಡಿದೆಡೆಯಲ್ಲೆಲ್ಲಾ ಜ್ಞಾನದ ಮಹಾಪೂರವೆ ಹರಿಯುತ್ತಿರುವುದರಿಂದ ಕಾಡಿಗೆ ಹೋದಾಗ ಊರಿನ ಹರಟೆಯನ್ನು ಅಲ್ಲಿಯೂ ಮುಂದುವರೆಸುವುದು ಬೇಡ. ಕಾಡಿನ ಅನೂಹ್ಯ ಜಗತ್ತನ್ನು ಅರಿಯಲು ಈ ಶೈಕ್ಷಣಿಕ ಉದ್ದೇಶದ ಚಾರಣ ನಮಗೆ ಹೊಸ ಜಗತ್ತನ್ನೆ ತೆರೆದಿಡುತ್ತದೆ.

ಕಾಡಿನ ನಡುವೆ ಇನ್ಯಾವುದೊ ಉಪಹಾದಿ ಕಾಣಿಸಿತೆಂದು ಒಬ್ಬಿಬ್ಬರು ಅದರಲ್ಲಿ ಕ್ರಮಿಸಬೇಡಿ. ಗುಂಪಿನಿಂದ ಬೇರೆಯಾಗಿ ತಪ್ಪಿಸಿಕೊಂಡು ಪಜೀತಿಗೊಳಗಾಗುವ ಸಾಧ್ಯತೆಯಿರುತ್ತದೆ. ಎಲ್ಲರಿಗಿಂತ ಮುಂದೆಯಿರುವ ಮಾರ್ಗದರ್ಶಕ ಹಾಗೂ ಎಲ್ಲರಿಗಿಂತ ಹಿಂದೆ ಇರುವ ಟ್ರೆಕ್ಕಿಂಗ್ ಮ್ಯಾನೇಜರ್ ನಡುವೆಯೇ ಉಳಿದೆಲ್ಲಾ ಚಾರಣಿಗರು ಇರುವುದು ಅಗತ್ಯ.

ಯಾವ ಕಾರಣಕ್ಕೂ ಕಾಡಿನಲ್ಲಿ ಬೆಂಕಿ ಹಾಕಬೇಡಿ. ಅನಿವಾರ್ಯವಾಗಿ ಬೆಂಕಿ ಹಾಕಲೇಬೇಕಿದ್ದರೆ, ಕೆಲಸ ಮುಗಿದ ಕೂಡಲೇ ಹಚ್ಚಿದ ಬೆಂಕಿಯನ್ನು ನೀರು ಹಾಕಿ ಸಂಪೂರ್ಣವಾಗಿ ನಂದಿಸಿ. ಹಾಗೆ ಮಾಡದೇ ಅಪ್ಪಿತಪ್ಪಿಯೂ ಕಾಡ್ಗಿಚ್ಚಿಗೆ ಕಾರಣವಾಗಬೇಡಿ.

ತೀರಾ ಆಕಸ್ಮಿಕವಾಗಿ ಕಾಡಿನಲ್ಲಿ ತಪ್ಪಿಸಿಕೊಂಡರೆ ಎಲ್ಲಿದ್ದೀರೋ ಅಲ್ಲಿಯೇ ಸ್ವಲ್ಪ ಎತ್ತರದ ಸುರಕ್ಷಿತ ಸ್ಥಳಕ್ಕೆ ಹೋಗಿ ನಿಲ್ಲಿ. ಗಾಬರಿ ಬೀಳಬೇಡಿ, ಸುಧಾರಿಸಿಕೊಳ್ಳಿ, ಧೈರ್ಯ ತಂದುಕೊಳ್ಳಿ. ನಿಮ್ಮಲ್ಲಿ ವಿಷಲ್ ಇದ್ದಲ್ಲಿ ನಿರಂತರವಾಗಿ ಊದಿ. ಖಚಿತತೆ ಇಲ್ಲದಿದ್ದಲ್ಲಿ ಎತ್ತ ಕಡೆಯೂ ನಡೆಯಬೇಡಿ. ಸುತ್ತಮುತ್ತ ಗಮನಿಸಿ, ಪರಿಸ್ಥಿತಿಯನ್ನು ಅವಲೋಕಿಸಿ. ನಿಮ್ಮ ತಂಡವೂ ನಿಮ್ಮನ್ನು ಹುಡುಕಲು ಪ್ರಯತ್ನಿಸುತ್ತಿರುತ್ತದೆ.



ಮಳೆ ಅಥವಾ ಮಂಜು ಸುರಿಯುತ್ತಿದ್ದಲ್ಲಿ ನಿಮ್ಮ ಕೂಗು ನಿಮ್ಮ ಸಂಗಾತಿಗಳಿಗೆ ತಲುಪುವುದಿಲ್ಲ, ನೆನಪಿಡಿ. ತಾಳ್ಮೆಯಿಂದ ಮುಂದಿನ ನಡೆಯನ್ನು ಯೋಜಿಸಿ. ಗಾಬರಿ, ಆತಂಕ ನಿಮ್ಮ ದೇಹದ ಶಕ್ತಿಯನ್ನು ಕುಗ್ಗಿಸುತ್ತವೆ. ಭಯ ನಿಮ್ಮನ್ನು ಹೊಸ ಪ್ರಯತ್ನಕ್ಕೆ ಪ್ರೇರೇಪಿಸಲೂಬಹುದು ಹಾಗೆಯೇ ನಿಮ್ಮನ್ನು ವಿಚಲಿತಗೊಳಿಸಲೂಬಹುದು. ಸಿಕ್ಕ ನೀರು, ಗುರುತಿಸಬಹುದಾದ ಹಣ್ಣನ್ನು ತಿನ್ನಿ, ತೊಂದರೆಯಿಲ್ಲ. ತೀರಾ ಸುಸ್ತಾದರೆ ನಿದ್ರೆ ಮಾಡಿ, ಮುಂದಿನ ಪ್ರಯತ್ನಕ್ಕೆ ಚೈತನ್ಯ ಹಾಗೂ ಧೈರ್ಯ ಬರುತ್ತದೆ. ಸಾಧ್ಯವಾದಲ್ಲಿ ಸಣ್ಣದಾಗಿ ಬೆಂಕಿ ಹಾಕಿ, ಹೆಚ್ಚು ಹೊಗೆ ಬರುವಂತೆ ಹಸಿ ಸೊಪ್ಪನ್ನು ಬೆಂಕಿಗೆ ಹಾಕಿ, ಇದರಿಂದ ಉಪದ್ರವಕಾರಿ ಕೀಟಗಳನ್ನು ದೂರವಿಡಬಹುದು ಹಾಗೂ ನಿಮ್ಮನ್ನು ಹುಡುಕುವವರಿಗೆ ಆ ಹೊಗೆಯ ಮೂಲ ಸಹಾಯ ಮಾಡಬಹುದು. ಗಾಯಗೊಂಡಿದ್ದಲ್ಲಿ ಹೆಚ್ಚು ಆಯಾಸಗೊಳ್ಳುತ್ತೀರಿ. ವಿಷಲ್ ಊದಿ ಗಮನ ಸೆಳೆಯಿರಿ. ಎಲ್ಲವೂ ಸುಖಾಂತ್ಯವಾದ ಮೇಲೆ ಹೊಗೆ ಏಳಿಸಲು ಹಾಕಿದ್ದ ಬೆಂಕಿಯನ್ನು ನಂದಿಸಿ ಎಂದು ತಿಳಿಹೇಳಿದರು ಮೋಹನ್ ರಾಜ್.

ಮರದ ಮೇಲಿರುವ ಆರ್ಕಿಡ್‌ಗಳು, ತೊಗಟೆಯಡಿ ವಾಸಿಸುವ ಹುಳುಹುಪ್ಪಟೆಗಳು, ಕಪ್ಪೆಗಳು, ಪೊಟರೆಯ ಪಕ್ಷಿಗಳು, ನೆಲದಡಿಯಿಂದ ಉದ್ಭವವಾಗುವ ಅಣಬೆಗಳು, ಯಾವುದೋ ಕೊರಕಲಿನಿಂದ ಜಿನುಗಿ ಬೃಹತ್ ನದಿಗೆ ಜೀವನೀಡುವ ಸರುಕಲುಗಳು, ಲಕ್ಷಾಂತರ ಜೀವಿಗಳಿಗೆ ಆವಾಸಸ್ಥಾನವಾಗಿರುವ ಜವುಗು ಪ್ರದೇಶಗಳು, ತನ್ನದೇ ಆದ ಜೀವವೈವಿಧ್ಯ ಪಡೆದಿರುವ ನಮ್ಮ ಲೆಕ್ಕದ ಬಂಜರು ಪ್ರದೇಶ, ಮರಗಳು ಬೇರಿಳಿಸಿ ಎಲೆಗಳ ಮೂಲಕ ಬಾಷ್ಪೀಕರಿಸುವ ನೀರು, ಮೇಲ್ಮಣ್ಣಿನ ಸೂಕ್ಷ್ಮ ಜೀವಿಗಳು, ಕಲ್ಲಿನಡಿಯ ನೀರಿನ ಸಂಗ್ರಹ, ದೊಣೆಗಳೊಳಗಿನ ಸರೀಸೃಪಗಳು ಇವುಗಳನ್ನು ಗಮನಿಸಬೇಕು. ಸೀಬೆಗಿಡದ ಮೇಲಿನ ಅಳಿಲು, ಪುಕ್ಕ ಒಣಗಿಸುವ ನೀರು ಕಾಗೆ, ಕಲ್ಲಿನ ಸಂದಿಯ ಏಡಿ, ಮುಟ್ಟಿದರೆ ಉಂಡೆಯಾಗುವ ಅಡಕೆ ಹುಳ, ಕೆಸರಿನ ಪಕ್ಕದ ಕಪ್ಪೆ, ಸಮೀಪಿಸಿದರೆ ಹಾರುವ ಚಿಟ್ಟೆ, ಬಿಸಿಲು ಕಾಯಿಸುವ ಆಮೆ, ಮುಟ್ಟಿದರೆ ಮುನಿಯುವ ಮಿಮೋಸಾ ಪುಡಿಕಾ, ಗಾಳಿಗೆ ತೊನೆದಾಡುವ ವೃಕ್ಷಗಳು, ಬಿದ್ದಲ್ಲೇ ಕುಂಬಾಗುತ್ತಿರುವ ಮಹಾಮರಗಳು, ಸದ್ದಿಲ್ಲದೇ ಎದ್ದು ನಿಲ್ಲುವ ಅಣಬೆಗಳು ಇವೆಲ್ಲವೂ ಸೇರಿಯೇ ನಮ್ಮ ಕಾಡುಗಳಾಗಿವೆ.

ಭೂಮಿಯ ನಿರಂತರ ಚಲನೆಗೂ, ನಾವು ಉಸಿರಾಡುವ ಗಾಳಿಗೂ, ಹವಾಮಾನ ಬದಲಾವಣೆಗೂ, ಬೆಟ್ಟಗುಡ್ಡಗಳ ಆಕಾರಕ್ಕೂ, ಉಕ್ಕುವ ಸಮುದ್ರಕ್ಕೂ, ಚೆಲ್ಲಾಡಿ ಹರಡಿರುವ ಮರುಭೂಮಿಗೂ, ನಿರ್ಲಿಪ್ತವಾಗಿರುವ ಹಿಮ ಪ್ರದೇಶಕ್ಕೂ, ನದಿ-ತೊರೆಗಳು ಹರಿಯುವ ದಿಕ್ಕು-ವೇಗಕ್ಕೂ, ನೀರಿನ ಮೂಲಗಳನ್ನಾಧರಿಸಿ ನಭದೆತ್ತರಕ್ಕೆ ನಿಂತಿರುವ ವೃಕ್ಷ ಸಂಪತ್ತಿಗೂ, ಹಸಿರಿನ ಆಶ್ರಯದಲ್ಲಿ ನೆಲೆ ನಿಂತಿರುವ ಸೂಕ್ಷ್ಮ ಜೀವಿಗಳಿಂದ ಹಿಡಿದು, ಬೃಹದಾಕಾರದ ಪ್ರಾಣಿಗಳವರೆಗೂ ಇರುವ ಪರಸ್ಪರ ಸಂಬಂಧ, ಮಿಳಿತಗಳು ಹೇಗಿವೆಯೆಂದರೆ, ಇವುಗಳಲ್ಲಿ ಯಾವುದಾದರೊಂದರಲ್ಲಿ ಸೂಕ್ಷ್ಮ ಬದಲಾವಣೆಯಾದರೆ, ಉಳಿದೆಲ್ಲವುದರಲ್ಲಿ ಪೂರಕ ವಿಪ್ಲವಗಳು ಸಂಭವಿಸುತ್ತವೆ.

ಕವಿತಾ ಮೇಡಂ, ನಿಮ್ಮೆದುರಲ್ಲಿರುವ ಗಿಡಕ್ಕೆ ಹಸಿರು ಬಣ್ಣ ಬರಲು ಕಾರಣ ಮಣ್ಣಿನಲ್ಲಿದೆಯೋ? ಅದು ನೀರಿನಿಂದ ಬಂತೋ? ಬೀಜದ ಪ್ರಭಾವವೋ? ವಾತಾವರಣವೋ? ಸೂರ್ಯನ ಬೆಳಕೋ? ಯಾವುದೇ ನಿರ್ದಿಷ್ಟ ಕಾರಣವನ್ನು ನೀಡಲು ಸಾಧ್ಯವಿಲ್ಲ. ಪ್ರತಿಯೊಂದಕ್ಕೂ ಪ್ರತಿಯೊಂದೂ ಕಾರಣವಾಗಿದೆ. ಕ್ರಿಯೆಯಿಲ್ಲದೆ ಪ್ರವಾಹವಿಲ್ಲ, ಚಲನೆಯಿಲ್ಲದೇ ಜೀವವಿಲ್ಲ, ಜೀವವಿಲ್ಲದೇ ಚೈತನ್ಯವಿಲ್ಲ, ಚೈತನ್ಯವಿಲ್ಲದೇ ಪ್ರಕ್ರಿಯೆಯಿಲ್ಲ.

ಚಾರಣ ತಾಣಗಳ ಕಡಿದಾದ ತುದಿಯನ್ನು ಏರಿದರೆ ಅವಿಸ್ಮರಣೀಯ ದೃಶ್ಯಗಳು ಕಣ್ಣು ಹಾಯಿಸಿದೆಡೆಯೆಲ್ಲಾ ತೆರೆದುಕೊಳ್ಳುತ್ತವೆ. ಎದುರಿನಿಂದ ಧಾವಿಸುವ ಮೋಡಗಳು ನಮ್ಮ ಸುತ್ತ ಸುಳಿದು ಅನಂತ ಆಕಾಶದಲ್ಲಿ ಲೀನವಾಗುವ ಬಗೆಯನ್ನು ಅನುಭವಿಸಿಯೇ ತಿಳಿಯಬೇಕು. ಕಣ್ಣೆದುರಿನ ಕಣಿವೆ, ಕಮರಿಗಳು ಇದ್ದಕ್ಕಿದ್ದಂತೆ ಅಂತರ್ಧಾನವಾಗುವುದು, ನೋಡನೋಡುತ್ತಿದ್ದಂತೆ ನಿರಭ್ರವಾಗಿ ಗೋಚರಿಸಿ ಶೋಲಾ ಕಾಡುಗಳ ದರ್ಶನ ಮಾಡಿಸುವ ಬಗೆ ರಮಣೀಯವಾದುದು. ಜೋಪಾನವಾಗಿ ನಡೆಯಿರಿ ಎಂದು ಹುರಿದುಂಬಿಸಿದರು. (ಮುಂದುವರಿಯುವುದು)

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248